ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,

ಹೊಸ ಸಾರ್ವಜನಿಕ ಕಚೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001

ಸಂಖ್ಯೆ: ಸಿ4(7) ಪ್ರಾ.ಶಿ ವರ್ಗ: 09/2019–20 ದಿನಾಂಕ:–20/08/2019

ಜ್ಞಾಪನ

**ವಿಷಯ** : 2018–19ನೇ ಸಾಲಿನ ಪ್ರೌಢಶಾಲಾ ಶಿಕ್ಷಕರ ವೃಂದದ ವರ್ಗಾವಣಾ ಗಣಕೀಕೃತ ಕೌನ್ಸಿಲಿಂಗ್ ಪ್ರಕ್ರಿಯೆಗಳನ್ನು ಮುಂದುವರೆಸುವ ಬಗ್ಗೆ ಮಾರ್ಗಸೂಚಿಗಳು – ವೇಳಾಪಟ್ಟಿಯಲ್ಲಿ ಅಲ್ಪ ಬದಲಾವಣೆಗಳ ಮಾಡಿರುವ ಬಗ್ಗೆ.

ಉಲ್ಲೇಖ : ಈ ಕಛೇರಿ **ಜ್ಞಾಪನ ಸಮ ಸಂಖ್ಯೆ ದಿನಾಂಕ** : 01.06.2019, ದಿನಾಂಕ 09/07/2019 ಮತ್ತು ದಿನಾಂಕ: 17/07/2019

******

ವರ್ಗಾವಣೆ ಪ್ರಕ್ರಿಯೆಗಳು ಜಾರಿಯಲ್ಲಿರುವ ಸಂದರ್ಭದಲ್ಲಿ ಶಿಕ್ಷಕರ ವಲಯದಿಂದ ಮುಂದಿಟ್ಟಿದ್ದ ಕೆಲವು ವರ್ಗಾವಣೆ ಸಂಬಂಧಿತ ಬೇಡಿಕೆಗಳ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳು ತಾತ್ಕಾಲಿಕವಾಗಿ ವರ್ಗಾವಣೆಗಳನ್ನು ಮುಂದೂಡಲು ಮತ್ತು ಪರಿಶೀಲಿಸಲು ಸೂಚಿಸಿದ್ದಂತೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿತ್ತು. ಸದರಿ ಪ್ರಕ್ರಿಯೆಗಳನ್ನು ಜಾರಿಯಲ್ಲಿದ್ದ ನಿಯಮಗಳಂತೆಯೇ ಇದೀಗ ಮುಂದುವರೆಸಲು ಸೂಚಿಸಿರುವುದರಿಂದ ಉಲ್ಲೇಖಿತ ಜ್ಞಾಪನಗಳನ್ನು ಮುಂದುವರೆಸುತ್ತಾ ದಿನಾಂಕ 17/07/2019ರ ಜ್ಞಾಪನದಲ್ಲಿನ ವೇಳಾಪಟ್ಟಿಯಲ್ಲಿ ಕೆಳಗಿನಂತೆ ಕೆಲವು ಪರಿಷ್ಕರಣೆಗಳನ್ನು ಮಾಡಿದ್ದು ಉಳಿದಂತೆ ಎಲ್ಲ ಸೂಚನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ. ಪರಿಷ್ಕರಣೆಗಳನ್ನು ಅನುಸರಿಸಿ ಆಯಾ ಪ್ರಾಧಿಕಾರಿಗಳು ಅಗತ್ಯ ಕ್ರಮ ಕೈಗೊಂಡು ನಿಗದಿತ ದಿನಾಂಕಗಳಂದು ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೈಗೊಳ್ಳತಕ್ಕದ್ದು. ಈ ಬಗ್ಗೆ ವ್ಯಾಪ್ತಿಯ ಎಲ್ಲಾ ಶಿಕ್ಷಕರ ಗಮನಕ್ಕೆ ವ್ಯಾಪಕವಾಗಿ ಪ್ರಚುರ ಪಡಿಸತಕ್ಕದು.

| ಕ್ರ.ಸ | ವಿವರ | ದಿನಾಂಕ: | ಕ್ರಮವಹಿಸುವ ಅಧಿಕಾರಿಗಳು |
|---|---|---|---|
| 11 | ಪ್ರೌಢಶಾಲಾ ಶಿಕ್ಷಕರ ವೃಂದದವರಿಗೆ ಘಟಕದೊಳಗಿನ ಕೋರಿಕೆ ವರ್ಗಾವಣೆಗೆ ಮುಂದುವರೆದ ಕೌನ್ಸಲಿಂಗ್ | 23.08.2019 ರಿಂದ 24.08.2019 ಬೆಳಗಾಂ ವಿಭಾಗಕ್ಕೆ ಸಂಬಂಧಪಟ್ಟಂತೆ(ಮಳೆ ಮತ್ತು ನೆರೆ ಕಾರಣಕ್ಕೆ ಈ ಹಿಂದೆ ಈ ಪ್ರಕ್ರಿಯೆಗಳನ್ನು ವಿಭಾಗಕ್ಕೆ ಸಂಬಂಧಪಟ್ಟಂತೆ ಮಾತ್ರ ಮುಂದೂಡಲಾಗಿತ್ತು) | ವಿಭಾಗೀಯ ಸಹನಿರ್ದೇಶಕರು |
| 12 | ಪ್ರೌಢಶಾಲಾ ದೈಹಿಕ ಶಿಕ್ಷಕರು/ವಿಶೇಷ ಶಿಕ್ಷಕರು ಘಟಕದೊಳಗಿನ ಕೋರಿಕೆ ವರ್ಗಾವಣೆಗೆ ಕೌನ್ಸಲಿಂಗ್ | 26.08.2019 | ವಿಭಾಗೀಯ ಸಹನಿರ್ದೇಶಕರು |
| 13 | ಪ್ರೌಢ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಒಳಗೆ **ಪರಸ್ಪರ** ವರ್ಗಾವಣೆಗೆ ಕೌನ್ಸಿಲಿಂಗ್. | 27.08.2019 | ವಿಭಾಗೀಯ ಸಹನಿರ್ದೇಶಕರು |
| | ಕಡ್ಡಾಯ ವರ್ಗಾವಣೆಗಳು | | |
| 14 | ಕಡ್ಡಾಯ ವರ್ಗಾವಣೆ (ನಿಯಮ 21(4) ರಂತೆ) – ವಿಶೇಷ ವರ್ಗೀಕರಣದ ಹುದ್ದೆಗಳಲ್ಲಿನ ಶಿಕ್ಷಕರ ಪ್ರಕರಣಗಳಲ್ಲಿ 5 ವರ್ಷದ ಅವಧಿ ಪೂರ್ಣವಾಗಿರುವ ಹಾಗೂ ಎ ವಲಯದಲ್ಲಿ ಹತ್ತು ವರ್ಷಗಳ ನಿರಂತರ ಸೇವೆಯನ್ನು ಪೂರೈಸಿರುವ ಶಿಕ್ಷಕರನು, ವಲಯ 'ಎ' ದಿಂದ ವಲಯ 'ಸಿ' ಗೆ | 28.08.2019 | ವಿಭಾಗೀಯ ಸಹನಿರ್ದೇಶಕರು / ಜಿಲ್ಲಾ ಉಪನಿರ್ದೇಶಕರು[ಆಡಳಿತ] |

| | | | |
|---|---|---|---|
| | ಕಡ್ಡಾಯ ವರ್ಗಾವಣೆ ಕೌನ್ಸಿಲಿಂಗ್. ಶೇ 20ಕ್ಕಿಂತಲೂ ಹೆಚ್ಚಿನ ಹುದ್ದೆಗಳು ಖಾಲಿ ಇರುವ ಘಟಕಕ್ಕೆ ಆದ್ಯತೆಯಲ್ಲಿ ವರ್ಗಾವಣೆಗೊಳಿಸುವುದು. | | |
| 15 | **ಕಡ್ಡಾಯ ವರ್ಗಾವಣೆ ಸೆಕ್ಷನ್3ಎ[1][2]ರಂತೆ** | | |
| | 'ಎ' ವಲಯದ ಶಿಕ್ಷಕರನ್ನು 'ಬಿ' ವಲಯಕ್ಕೆ ವರ್ಗಾವಣಾ ಕೌನ್ಸಿಲಿಂಗ್ (ಖಾಲಿ ಹುದ್ದೆಗಳ ಲಭ್ಯತೆಗೆ ಒಳಪಟ್ಟು) ಹಾಗೂ 'ಎ' ವಲಯದ ಶಿಕ್ಷಕರನ್ನು 'ಸಿ' ವಲಯಕ್ಕೆ ವರ್ಗಾವಣೆಗಾಗಿ ಕೌನ್ಸಿಲಿಂಗ್ – ಶೇ 20ಕ್ಕಿಂತಲೂ ಹೆಚ್ಚಿನ ಹುದ್ದೆಗಳು ಖಾಲಿ ಇರುವ ಘಟಕಕ್ಕೆ ಆದ್ಯತೆಯಲ್ಲಿ ವರ್ಗಾವಣೆಗೊಳಿಸುವುದು. | 29.08.2019 ರಿಂದ 31.08.2019 | ವಿಭಾಗೀಯ ಸಹನಿರ್ದೇಶಕರು |
| | **ಕೋರಿಕೆ ಮತ್ತು ಪರಸ್ಪರ ವರ್ಗಾವಣೆಗಳು** | | |
| 16 | ಪ್ರೌಢ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್ | 06.09.2019 ರಿಂದ 13.09.2019 (ದಿನಾಂಕ :10.09.2019 ಹೊರತುಪಡಿಸಿ) | ನಿರ್ದೇಶಕರು [ಪ್ರೌಢಶಿಕ್ಷಣ] |
| 17 | ಪ್ರೌಢ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗಿನ ಕೋರಿಕೆ ವರ್ಗಾವಣೆಗಳಿಗೆ ಕೌನ್ಸಿಲಿಂಗ್(ದೈಹಿಕ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರು) | 14.09.2019 | ನಿರ್ದೇಶಕರು [ಪ್ರೌಢಶಿಕ್ಷಣ] |
| 18 | ಪ್ರೌಢ ಶಾಲಾ ಶಿಕ್ಷಕರ ವೃಂದದವರಿಗೆ ಘಟಕದ ಹೊರಗೆ ಪರಸ್ಪರ ವರ್ಗಾವಣೆಗೆ ಕೌನ್ಸಿಲಿಂಗ್ | 16.09.2019 | ನಿರ್ದೇಶಕರು [ಪ್ರೌಢಶಿಕ್ಷಣ] |

**(ಡಾ॥ ಕೆ.ಜಿ.ಜಗದೀಶ, ಭಾ.ಆ.ಸೇ., )**
**ಆಯುಕ್ತರು**
**ಸಾರ್ವಜನಿಕ ಶಿಕ್ಷಣ ಇಲಾಖೆ**

**ಇವರಿಗೆ:**

1. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.
2. ಆಪ್ತ ಕಾರ್ಯದರ್ಶಿಯವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಜಂಟಿ ಆಯುಕ್ತರು(ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ

**ಪ್ರತಿಯನ್ನು:**

1. ಸಹ ನಿರ್ದೇಶಕರು–1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ವಿಭಾಗ.
2. ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ

3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಸಹನಿರ್ದೇಶಕರು ಹಾಗೂ ಪದನಿಮಿತ್ತ ವಿಭಾಗೀಯ ಕಾರ್ಯದರ್ಶಿಗಳು
4. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು.
5. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಕ್ರಮಕ್ಕಾಗಿ.
6. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ) ಮತ್ತು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಇವರುಗಳಿಗೆ
7. ಮುಖ್ಯಸ್ಥರು, ಇ-ಗೌರ್ನೆನ್ಸ್, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು-ಪ್ರಸಕ್ತ ವರ್ಗಾವಣೆಗಳಿಗೆ ಈಗಾಗಲೇ ಸಭೆಯಲ್ಲಿ ಸೂಚಿಸಿರುವಂತೆ "ತಂತ್ರಾಂಶವನ್ನು" ಸಜ್ಜುಗೊಳಿಸಿ ಅಗತ್ಯ ತಾಂತ್ರಿಕ ಸಹಕಾರವನ್ನು ಒದಗಿಸಲು ಸಂಬಂಧಿತ ತಂಡವನ್ನು ನಿಯೋಜಿಸಲು ಮತ್ತು ವೇಳಾಪಟ್ಟಿಯಂತೆ ಅಗತ್ಯ ಕ್ರಮ ಕೈಗೊಳ್ಳಲು ಕೋರಿದೆ.
8. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರು (ಅಭಿವೃದ್ಧಿ) ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್)
9. ರಾಜ್ಯದ ಎಲ್ಲಾ ತಾಲ್ಲೂಕ್ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ
10. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಅಗತ್ಯ ಕ್ರಮಕ್ಕಾಗಿ
11. ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಣೆಗೆ
12. ಕಛೇರಿ ಪ್ರತಿ.